ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಶಾಸಕರು ಮುಖ್ಯಮಂತ್ರಿಯವರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 10/03/2020

# ಶಾಸಕರ ನಿಧಿ ಬಾಕಿ ಶೀಘ್ರ ಬಿಡುಗಡೆ

ಬೆಂಗಳೂರು: ಶಾಸಕರ ಕ್ಷೇತ್ರಾಭಿವೃದ್ಧಿ ಬಾಕಿ ಅನುದಾನವನ್ನು ಶೀಘ್ರ ಬಿಡುಗಡೆ ಮಾಡುವುದಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭರವಸೆ ನೀಡಿದ್ದಾರೆ. ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಸೋಮವಾರ ವಿಧಾನಪರಿಷತ್ತಿನಲ್ಲಿ ಉತ್ತರಿಸಿದ ಅವರು ಈಗಾಗಲೇ ತಲಾ 50 ಲಕ್ಷ ರೂ. ಬಿಡುಗಡೆ ಮಾಡಲಾಗಿದೆ. ಬಾಕಿ ಒಂದೂವರೆ ಕೋಟಿ ರೂ.ಗಳನ್ನು ಶೀಘ್ರವೇ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.



ಬೆಂಗಳೂರಿನಲ್ಲಿ ಸರ್ಕಾರಿ ಭೂಮಿ.ಒತ್ತುವರಿ ತೆರವಿಗೆ ಮಾಜಿ ಸ್ಪೀಕರ್ ಕೆ.ಜಿ.ಬೋಪಯ್ಯ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ.

ಸಮಿತಿ ನೀಡುವ ವರದಿ ಆಧರಿಸಿ ಒತ್ತುವರಿ ತೆರವು ಮಾಡಲಾಗುವುದು. ಇದರಿಂದ ಸರ್ಕಾರಕ್ಕೂ ಆದಾಯ ಲಭ್ಯ ಆಗಲಿದೆ ಎಂದರು.

ಬಜೆಟ್‌ನಲ್ಲಿ ಸರ್ಕಾರ ನೀರಾವರಿ, ಕೃಷಿಗೆ ಆದ್ಯತೆ ನೀಡಿದೆ. ಕೃಷ್ಣಾ ಮೇಲ್ದಂಡೆ ಯೋಜನೆ ಸರ್ಕಾರದ ಆದ್ಯತೆಯಾಗಿದ್ದು ಹಂತ ಹಂತವಾಗಿ ಬಾಕಿ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ನೆರೆ ಸಂತ್ರಸ್ತರು ಮನೆ ಕಟ್ಟಿಕೊಳ್ಳಲು ಈಗಾಗಲೇ ತಲಾ ಒಂದು ಲಕ್ಷ ರೂ. ನೀಡಲಾಗಿದ್ದು ಸದ್ಯದಲ್ಲಿಯೇ ಎರಡನೇ ಹಂತವಾಗಿ ಮತ್ತೊಂದು ಲಕ್ಷ ರೂ. ನೀಡಲಾಗುವುದು. ಮನೆ ಕಳೆದುಕೊಂಡವರಿಗೆ ಮನೆ ಕಟ್ಟಿಕೊಡುವ ಹೊಣೆಗಾರಿಕೆ ಸರ್ಕಾರದ್ದು ಎಂದರು. ಮಹದಾಯಿ ಯೋಜನೆ ಜಾರಿಗೆ ಸಂಬಂಧ 500 ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಮೀಸಲಿಡಲಾಗಿದ್ದು ಆದಷ್ಟು ಶೀಘ್ರ ಕಾಮಗಾರಿ ಆರಂಭಿಸುವುದಾಗಿ ತಿಳಿಸಿದರು.